## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗದಗ ಜಿಲ್ಲೆಯ ಜನವಸತಿಗಳಿಗೆ ಶಾಶ್ವತ ಹಾಗೂ ಸುರಕ್ಷಿತ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು **DBOT** ಮಾದರಿಯಲ್ಲಿ ಟೆಂಡರ್ ಕರೆಯಲು ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ದಿನಾಂಕ:24.01.2014ರ SLSSC ಸಭಾ ನಡವಳಿಗಳು.
2. ಮುಖ್ಯ ಇಂಜಿನಿಯರ್, PREDರವರ ಪತ್ರ ಸಂ: ಮುಇಂ/ಪಂರಾಇಂಇ/ತ್ವಗ್ರಾನೀಸ-1/ತಾಂಸ-1/ಸಇಂ-4/2014-15 ದಿನಾಂಕ:14.05.2014.

---

**ಪೀಠಿಕೆ:**

1. ಗದಗ ಜಿಲ್ಲೆಯ **342** ಜನವಸತಿಗಳಿಗೆ **ರೂ.1035.65ಕೋಟಿ** ಅಂದಾಜಿನಲ್ಲಿ ಬೃಹತ್ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು **ದಿನಾಂಕ:24.01.2014ರ SLSSC** ಸಭೆಯ ಅನುಮೋದನೆಯನ್ವಯ **DBOT** ಆಧಾರದಡಿ **E-Procurement**ನಲ್ಲಿ KTPP ಕಾಯ್ದೆಯನ್ವಯ ಟೆಂಡರ್ ಕರೆದು, **5 ವರ್ಷಗಳ O&M** ವ್ಯವಸ್ಥೆಯೊಂದಿಗೆ ಅನುಷ್ಠಾನಗೊಳಿಸುವ ಸಂಬಂಧ ಅರ್ಹ ಸಂಸ್ಥೆ ಗೊತ್ತುಪಡಿಸಲು ಅನುಮತಿ ನೀಡಲು **CE/PRED** ಬೆಂಗಳೂರುರವರು ಮೇಲೆ (2)ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಕೋರಿದ್ದಾರೆ. ಈ ಸಲುವಾಗಿ **ದಿನಾಂಕ:23.07.2014ರಂದು** ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 41 ಗ್ರಾನೀಸ(5) 2014 ಬೆಂಗಳೂರು, ದಿನಾಂಕ:30.07.2014**

2. ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ಗದಗ ಜಿಲ್ಲೆಯ ಜನವಸತಿಗಳಿಗೆ ಶಾಶ್ವತವಾಗಿ ತುಂಗಭದ್ರಾ ಜಲಾಶಯ ಹಾಗೂ ರೇಣುಕಾ ಸಾಗರ ಜಲಮೂಲ ಆಧರಿಸಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು **KTPP** ಕಾಯ್ದೆಯನ್ವಯ DBOT ಆಧಾರದಲ್ಲಿ **ರೂ.1030.65ಕೋಟಿ (ಒಂದು ಸಾವಿರದ ಮೂವತ್ತು ಕೋಟಿ ಅರವತ್ತೈದು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜಿನಲ್ಲಿ **5 ವರ್ಷಗಳ ಕಾರ್ಯಾಚರಣೆ ಮತ್ತು (O&M) ನಿರ್ವಹಣೆ ಬದ್ಧತೆ ಮತ್ತು ಜನವಸತಿಗಳ ಆಂತರಿಕ ವಿತರಣಾ ವ್ಯವಸ್ಥೆಯಲ್ಲಿನ ಕೊರತೆಗಳನ್ನು ನೀಗಿಸುವುದು ಒಳಗೊಂಡಂತೆ** ಟೆಂಡರ್ ಕರೆಯಲು ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ. ಟೆಂಡರ್ ಕರೆದು ಸರ್ಕಾರದ ಅನುಮೋದನೆಗೆ ಸಲ್ಲಿಸಲು CE, RWSD / PRED ಕ್ರಮವಹಿಸಬೇಕು.

3. ಟೆಂಡರ್ ಕರೆಯುವಾಗ ಈಗಾಗಲೇ ಬಹುಗ್ರಾಮ ಯೋಜನೆಗಳಡಿ ಆವರಿಸಿರುವ ಜನವಸತಿಗಳನ್ನು ಹೊರತುಪಡಿಸಿ ಉಳಿದೆಲ್ಲ ಗ್ರಾಮೀಣ ಜನವಸತಿಗಳನ್ನು ಆವರಿಸಲು ಟೆಂಡರ್ ಕರೆಯುವುದು.

4. ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ವಾಸ್ತವಿಕ ಅಂದಾಜು ಮೀರಿ ಹೆಚ್ಚಳವಾಗದಂತೆ ಅನುಷ್ಠಾನಾಧಿಕಾರಿಗಳು ಅಗತ್ಯವಿರುವ ಒಡಂಬಡಿಕೆ / ಕರಾರು ಪತ್ರವನ್ನು ಟೆಂಡರ್ ನಿಬಂಧನೆಗಳಲ್ಲಿ ಅಳವಡಿಸಿಕೊಳ್ಳತಕ್ಕದ್ದು.

30/7/14

...2

5. ಈ ಯೋಜನೆಯನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರೀವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ ಸರ್ಕಾರದ ಅನುಮೋದನೆ ಪಡೆಯಲು ಸಹ **CE,PRED / (SWSD)** ಕ್ರಮವಹಿಸಬೇಕು.

6. ಈ ಯೋಜನೆ ಸಲುವಾಗಿನ ವೆಚ್ಚವನ್ನು NRDWP ಹಾಗೂ FCGನಡಿ ಒದಗಿಸಿಕೊಳ್ಳಲು CE/PRED IMISನಲ್ಲಿ ಅಗತ್ಯವಿರುವ ಅನುದಾನದ ಪ್ರಾವಧಾನ ಮಾಡಿಕೊಳ್ಳಬೇಕು.

7. **ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಸಂಖ್ಯೆ:FD 161 EXP-6/2014 ದಿನಾಂಕ:17.06.2014, ಯೋಜನಾ ಇಲಾಖೆಯ ಸಹಮತಿ ಸಂಖ್ಯೆ:ಯೋಇ 40 ಜಿಯೋವಿ 2014 ದಿನಾಂಕ:27.05.2014, ಜಲಸಂಪನ್ಮೂಲ ಇಲಾಖೆಯ ಸಹಮತಿ ಸಂಖ್ಯೆ:ಜಸಂಇ 143 ವಿಬ್ಯಾಇ 2014, ದಿನಾಂಕ:27.05.2014, ನಗರಾಭಿವೃದ್ಧಿ ಇಲಾಖೆಯ ಸಹಮತಿ ಸಂಖ್ಯೆ:UDD 06 UWS 2014, ದಿನಾಂಕ:28.06.2014ರನ್ವಯ ಹೊರಡಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
**ಇಮೇಲ್: rk3452000@gmail.com**
**ಫೋನ್:22032806, ಫ್ಯಾಕ್ಸ್:22203175**

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು-8.
9. ವಿಶೇಷಾಧಿಕಾರಿಗಳು(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, 2ನೇ ಮಹಡಿ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ವೃತ್ತ, ಬೆಂಗಳೂರು.-09.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಗದಗ.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ.
14. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, ಧಾರವಾಡ.
15. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಗದಗ.
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕೇಂದ್ರ ಕಛೇರಿ, ಬೆಂಗಳೂರು-09.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
19. ನಿರ್ದೇಶಕರು **KRWSSA** ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ/ ಅಪರ ನಿರ್ದೇಶಕರು, (ಆರ್ಥಿಕ) **KRWSSA/SWSM** ಆಂತರಿಕ ಆರ್ಥಿಕ ಸಲಹೆಗಾರರು, **RDPR** ಇಲಾಖೆ, ಇವರುಗಳ ಆಪ್ತ ಸಹಾಯಕರು.
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, **BWSSB Branch**, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
23. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ - 10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.